Prajavani Page 3 11/12/2016

## ಹಾರೋಹಳ್ಳಿಯಲ್ಲಿ ವಿದ್ಯಾರ್ಥಿನಿಲಯ ಉದ್ಘಾಟನೆ

# ಸೌರ ವಿದ್ಯುತ್, ಬಯೊಗ್ಯಾಸ್ ಸೌಲಭ್ಯ

ಪ್ರಜಾವಾಣಿ ವಾರ್ತೆ

ಬೆಂಗಳೂರು: ಹಾರೋಹಳ್ಳಿಯ ಇಸ್ರೊ ಬಡಾವಣೆಯಲ್ಲಿ ಸಮಾಜಕಲ್ಯಾಣ ಇಲಾಖೆಯ ಮೂಲಸೌಕರ್ಯಗಳ ಅಭಿವೃದ್ಧಿ ಅನುದಾನದಲ್ಲಿ ನಿರ್ಮಿಸಿರುವ ಸರ್ಕಾರಿ ಮೆಟ್ರಿಕ್ ನಂತರದ ಬಾಲಕಿಯರ ಹಾಗೂ ಸ್ನಾತಕೋತ್ತರ ವಿದ್ಯಾರ್ಥಿನಿಲಯಗಳನ್ನು ಶನಿವಾರ ಲೋಕಾರ್ಪಣೆಗೊಳಿಸಲಾಯಿತು.

'ಈ ವಿದ್ಯಾರ್ಥಿನಿಲಯಗಳ ವಿದ್ಯುತ್ ಬೇಡಿಕೆಯನ್ನು ಸೌರ ವಿದ್ಯುತ್ ಮೂಲಕ ಪೂರೈಸಿಕೊಳ್ಳಲಾಗುತ್ತಿದೆ. ಜೈವಿಕ ಅನಿಲ (ಬಯೊಗ್ಯಾಸ್) ಹಾಗೂ ಮಳೆ ನೀರು ಸಂಗ್ರಹ ಘಟಕಗಳನ್ನು ಇಲ್ಲಿ ಅಳವಡಿಸಲಾಗಿದೆ. ಇಲಾಖೆಯ ವಿದ್ಯಾರ್ಥಿನಿಲಯಕ್ಕೆ ಇಂತಹ ಸಕಲ ಸೌಕರ್ಯಗಳನ್ನು ಒದಗಿಸಿರುವುದು ರಾಜ್ಯದಲ್ಲಿ ಇದೇ ಮೊದಲು' ಎಂದು ಸಮಾಜಕಲ್ಯಾಣ ಇಲಾಖೆಯ ಬೆಂಗಳೂರು ನಗರ ಜಿಲ್ಲಾ ಜಂಟಿ ನಿರ್ದೇಶಕ ಲಕ್ಷ್ಮಣರೆಡ್ಡಿ ತಿಳಿಸಿದರು.

**ಸಾಮರ್ಥ್ಯ:** 'ಪುರುಷರ ಹಾಸ್ಟೆಲ್‌ನಲ್ಲಿ 250 ವಿದ್ಯಾರ್ಥಿಗಳು ಹಾಗೂ ಮಹಿಳೆಯರ ಹಾಸ್ಟೆಲ್‌ನಲ್ಲಿ 150 ವಿದ್ಯಾರ್ಥಿನಿಯರ ವಾಸ್ತವ್ಯಕ್ಕೆ ವ್ಯವಸ್ಥೆ ಕಲ್ಪಿಸಲಾಗಿದೆ' ಎಂದರು.

**ಏನೇನು ಸೌಕರ್ಯ:** 'ಬಾಲಕರ ವಿದ್ಯಾರ್ಥಿ ನಿಲಯದಲ್ಲಿ 32 ಹಾಗೂ ಬಾಲಕಿಯರ ವಿದ್ಯಾರ್ಥಿ ನಿಲಯದಲ್ಲಿ 26 ಕೊಠಡಿಗಳಿವೆ. ಪ್ರತಿಯೊಬ್ಬ ವಿದ್ಯಾರ್ಥಿಗಳಿಗೂ ಮಂಚ, ಹಾಸಿಗೆ, ಕಂಪ್ಯೂಟರ್ ಟೇಬಲ್, ಕುರ್ಚಿ ಒದಗಿಸಲಾಗಿದೆ. ಭೋಜನಾಲಯ, ಅಡುಗೆ ಮನೆ, ಶೌಚಾಲಯ, ಸ್ನಾನದ ಕೊಠಡಿ ಹಾಗೂ ಬಟ್ಟೆ ತೊಳೆಯಲು ವ್ಯವಸ್ಥೆ ಕಲ್ಪಿಸಲಾಗಿದೆ' ಎಂದರು.

ಕಟ್ಟಡವನ್ನು ಉದ್ಘಾಟಿಸಿದ ಶಾಸಕ ಎಸ್.ಆರ್.ವಿಶ್ವನಾಥ್, 'ವಿದ್ಯಾರ್ಥಿ ನಿಲಯಗಳೆಂದರೆ ಅವ್ಯವಸ್ಥೆಗಳ ಕೂಪ ಎಂಬ ಭಾವನೆ ಜನರಲ್ಲಿದೆ. ಆದರೆ, ಈ ವಿದ್ಯಾರ್ಥಿ ನಿಲಯಗಳಲ್ಲಿ ಮಕ್ಕಳಿಗೆ ಎಲ್ಲ ರೀತಿಯ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ' ಎಂದರು.

'ಅನ್ಯರಾಜ್ಯದ ವಿದ್ಯಾರ್ಥಿಗಳಲ್ಲಿ ಹೊರಗಿನವರು ಎಂಬ ಭಾವನೆ ಉಂಟಾಗದ ರೀತಿಯಲ್ಲಿ ವ್ಯವಸ್ಥೆ ಕಲ್ಪಿಸುತ್ತೇವೆ' ಎಂದು ಭರವಸೆ ನೀಡಿದರು.

ಬೆಂಗಳೂರು ನಗರ ಜಿಲ್ಲಾ ಪಂಚಾಯ್ತಿ ಅಧ್ಯಕ್ಷ ಮುನಿರಾಜು, ತಾಲ್ಲೂಕು ಪಂಚಾಯ್ತಿ ಅಧ್ಯಕ್ಷೆ ಜ್ಯೋತಿ ಕಲ್ಲೇಶ್, ಬಿಬಿಎಂಪಿ ಸದಸ್ಯರಾದ ಎಂ.ಸತೀಶ್, ಪದ್ಮಾವತಿ ಅಮರನಾಥ್ ಉಪಸ್ಥಿತರಿದ್ದರು.



ಮೆಟ್ರಿಕ್ ನಂತರದ ಪುರುಷರ ವಿದ್ಯಾರ್ಥಿನಿಲಯದ ಕಟ್ಟಡ

### ಮುಖ್ಯಾಂಶಗಳು

- ಪ್ರತಿ ವಿದ್ಯಾರ್ಥಿಗೂ ಕಂಪ್ಯೂಟರ್, ಟೇಬಲ್ ಸೌಲಭ್ಯ
- ಬಾಲಕರ ವಿದ್ಯಾರ್ಥಿ ನಿಲಯದಲ್ಲಿ 32 ಕೊಠಡಿಗಳು
- ಬಯೊಗ್ಯಾಸ್ ಹಾಗೂ ನೀರು ಸಂಗ್ರಹ ಘಟಕ

### ಅಂಕಿ ಅಂಶ

**₹3.49 ಕೋಟಿ**
ಮೆಟ್ರಿಕ್ ನಂತರದ ಮಹಿಳೆಯರ ಹಾಸ್ಟೆಲ್ ಕಟ್ಟಡದ ವೆಚ್ಚ

**₹4.16 ಕೋಟಿ**
ಸ್ನಾತಕೋತ್ತರ ಪುರುಷರ ಹಾಸ್ಟೆಲ್ ಕಟ್ಟಡದ ವೆಚ್ಚ

